ಕರ್ನಾಟಕ ಸರ್ಕಾರ

ಸಂಖ್ಯೆ: ನಲಿಇ 497 ಎಂಎನ್‌ಪ್ಯೆ 2016 (ಭಾಗ-1)

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ: 26-09-2016.

ಇವರಿಂದ,

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ,
ವಿಕಾಸಸೌಧ, ಬೆಂಗಳೂರು.

ಇವರಿಗೆ

ಆಯುಕ್ತರು,
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,
ಬೆಂಗಳೂರು.

ಮಾನ್ಯರೆ,

ವಿಷಯ: ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವತಿಯಿಂದ ಸರ್ಕಾರದ ಅನುದಾನಗಳು, 110 ಹಳ್ಳಿಗಳ ಅಭಿವೃದ್ಧಿಗಳ ಕಾಮಗಾರಿಗಳನ್ನು ಮೆ॥ ಕೆ.ಆರ್.ಐ.ಡಿ.ಎಲ್. ಮುಖಾಂತರ ನಿರ್ವಹಿಸಲು ಸರ್ಕಾರದ ಅನುಮೋದನೆ ನೀಡುವಂತೆ ಕೋರಿರುವ ಬಗ್ಗೆ.

ಉಲ್ಲೇಖ: ತಮ್ಮ ಪತ್ರ ಸಂಖ್ಯೆ: ಅ/ಪಿಆರ್/2349/2015-16, ದಿನಾಂಕ:01-07-2016.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವತಿಯಿಂದ ಸರ್ಕಾರದ ಅನುದಾನಗಳು, 110 ಹಳ್ಳಿಗಳ ಅಭಿವೃದ್ಧಿಗಳ ಕಾಮಗಾರಿಗಳನ್ನು (ಆದೇಶ ಸಂಖ್ಯೆ: ನಅಇ 199 ಎಸ್‌ಎಫ್‌ಸಿ 2016 (ಭಾಗ-1), ದಿನಾಂಕ: 21-06-2016 ರಲ್ಲಿ ಅನುಮೋದನೆ ನೀಡಿರುವ ಕ್ರಿಯಾ ಯೋಜನೆಗಳ ಕಾವಗಾರಿಗಳನ್ನು ಹೊರತು ಪಡಿಸಿ) ಮೆ॥ ಕೆ.ಆರ್.ಐ.ಡಿ.ಎಲ್. ಮುಖಾಂತರ ನಿರ್ವಹಿಸಲು ಕೋರಿರುವುದಕ್ಕೆ ಸಂಬಂಧಿಸಿದಂತೆ ಆರ್ಥಿಕ ಇಲಾಖೆಯು ದಿನಾಂಕ: 07-09-2016 ರಂದು ಹೊರಡಿಸಿರುವ ಅಧಿಸೂಚನೆಯ ಪ್ರತಿಯನ್ನು ಇದರೊಂದಿಗೆ ಲಗತ್ತಿಸಿ ಮುಂದಿನ ಆಗತ್ಯ ಕ್ರಮಕಾಗಿ ತಮಗೆ ತಿಳಿಸಲು ನಾನು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,

ಹೊರಡಿಸಿದೆ
ದಿನಾಂಕ: 26.9.16

(ಎನ್ ನರಸಿಂಹಮೂರ್ತಿ)
ಸರ್ಕಾರದ ಅಧೀನ ಕಾರ್ಯದರ್ಶಿ(ಪ),
ನಗರಾಭಿವೃದ್ಧಿ ಇಲಾಖೆ (ಬಿ.ಬಿ.ಎಂ.ಪಿ.)

(29)

ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಬಿ.ಬಿ.ಎಂ.ಪಿ.ಗೆ ಹೊಸದಾಗಿ ಸೇರ್ಪಡೆಗೊಂಡ ನಗರಸಭೆ ಮತ್ತು ಪುರಸಭೆಗಳಿಗೆ 2014–15ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿರುವಂತೆ ರೂ.250.00 ಕೋಟಿ ವಿಶೇಷ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:
1. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಇವರ ಪತ್ರ ಸಂಖ್ಯೆ: ಮುಲೆಅ/ಆಯವ್ಯಯ/ಪಿಆರ್/6586/2014–15, ದಿನಾಂಕ: 10–11–2014.
2. ಸರ್ಕಾರಿ ಪತ್ರ ಸಂಖ್ಯೆ: ನೆಅಇ 745 ಎಂಎನ್‌ವೈ 2014, ದಿನಾಂಕ: 19–01–2015.
3. ಸರ್ಕಾರದ ಆದೇಶ ಸಂಖ್ಯೆ: ನಅಇ 745 ಎಂಎನ್‌ವೈ 2015, ದಿನಾಂಕ: 29–01–2015.
4. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಇವರ ಪತ್ರ ಸಂಖ್ಯೆ: ಮುಲೆಅ/ಆಯವ್ಯಯ/ಪಿಆರ್/6586–ಎ/2014–15, ದಿನಾಂಕ: 22–01–2015.
5. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಇವರ ಪತ್ರ ಸಂಖ್ಯೆ: ಮುಲೆಅ/ಆಯವ್ಯಯ/ಪಿಆರ್/207/2014–15, ದಿನಾಂಕ: 16–02–2015.

* * * * *

ಪ್ರಸ್ತಾವನೆ:

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರು ಮೇಲೆ (1) ರಲ್ಲಿ ಓದಲಾದ ಪತ್ರದಲ್ಲಿ 2014–15ನೇ ಸಾಲಿನ ಆಯವ್ಯದಲ್ಲಿ ಮಾನ್ಯ ಮುಖ್ಯಮಂತ್ರಿಗಳು ಪಾಲಿಕೆಗೆ ಹೊಸದಗಿ ಸೇರ್ಪಡೆಗೊಂಡಿರುವ ಹಿಂದಿನ 7 ನಗರ ಸಭೆ ಮತ್ತು 1 ಪುರಸಭೆಯ ವ್ಯಾಪ್ತಿಯಲ್ಲಿ ಹಿಂದುಳಿದ ಪ್ರದೇಶಗಳಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ವಿಶೇಷ ಅನುದಾನವಾಗಿ ರೂ.25.00 ಕೋಟಿಗಳನ್ನು ನೀಡುವುದಾಗಿ ಘೋಷಿಸಿರುತ್ತಾರೆ. ಈ ರೀತಿ ಸೇರ್ಪಡೆಗೊಂಡ ಸದರಿ ಪ್ರದೇಶಗಳಲ್ಲಿ ವಿಶೇಷ ಅಭಿವೃದ್ಧಿ ಕಾಮಗಾರಿಗಳನ್ನು ಹಮ್ಮಿಕೊಳ್ಳಲಾಗಿದ್ದು, ಕೆಲವು ಕಾಮಗಾರಿಗಳು ಮುಕ್ತಾಯವಾಗಿದ್ದು, ಇನ್ನೂ ಕೆಲವು ಕಾಮಗಾರಿಗಳು ಪ್ರಗತಿಯ ಹಂತದಲ್ಲಿರುತ್ತವೆ. ಪ್ರಸ್ತುತ ಪಾಲಿಕೆಯ ಆರ್ಥಿಕ ಪರಿಸ್ಥಿತಿ ಸಂಕಷ್ಟದಲ್ಲಿದ್ದು, ಪೂರ್ಣಗೊಂಡ ಕಾಮಗಾರಿಗಳ ಬಿಲ್ಲುಗಳ ಮೊತ್ತಗಳನ್ನು ಪಾಲಿಕೆಯ ಸಂಪನ್ಮೂಲಗಳಿಂದ ಪಾವತಿಸಲು ಕಷ್ಟಕರವಾಗಿದ್ದು, ಸದರಿ ಪ್ರದೇಶದಲ್ಲಿ ಕೈಗೊಂಡಿರುವ ಅಭಿವೃದ್ಧಿ ಕಾಮಗಾರಿಗಳಿಗಾಗಿ ರೂ.250.00 ಕೋಟಿಗಳನ್ನು ಬಿಡುಗಡೆ ಮಾಡುವಂತೆ ಕೋರಿದ್ದರು.

2. ಮೇಲೆ (2) ರಲ್ಲಿ ಓದಲಾದ ಸರ್ಕಾರದ ಪತ್ರದಲ್ಲಿ ಬಿ.ಬಿ.ಎಂ.ಪಿ.ಯ ವ್ಯಾಪ್ತಿಗೆ ಸೇರ್ಪಡೆಗೊಂಡ ಹಿಂದಿನ ನಗರ ಸಭೆ ಮತ್ತು ಪುರಸಭೆಗಳ ಹಿಂದುಳಿದ ಪ್ರದೇಶಗಳನ್ನು ರೂ.250.00 ಕೋಟಿಗಳ (ಇನ್ನೂರಾ ಐವತ್ತು ಕೋಟಿಗಳು ಮಾತ್ರ) ವೆಚ್ಚದಲ್ಲಿ ಅಭಿವೃದ್ಧಿಪಡಿಸಲು ಸರ್ಕಾರದ ತಾತ್ವಿಕ ಅನುಮೋದನೆಯನ್ನು ಮತ್ತು ಈ ಕೆಳಕಂಡಂತೆ ಅನುದಾನವನ್ನು ಹಂಚಿಕೆ ಮಾಡಲು ಅನುಮೋದನೆ ನೀಡಲಾಗಿದೆ.

ಕ್ರಮ ಸಂಖ್ಯೆ.	ವಿಧಾನಸಭಾ ಕ್ಷೇತ್ರದ ಹೆಸರು	ಅನುದಾನ (ರೂ.ಕೋಟಿಗಳಲ್ಲಿ)
1	ಕೆ.ಆರ್.ಪುರಂ	45.00
2	ಯಶವಂತಪುರ	45.00
3	ರಾಜರಾಜೇಶ್ವರಿ ನಗರ	45.00
4	ಬ್ಯಾಟರಾಯನಪುರ	40.00

...2.

(28)

5	ಬೆಂಗಳೂರು ದಕ್ಷಿಣ	20.00
6	ಯಲಹಂಕ	15.00
7	ಮಹದೇವಪುರ	20.00
8	ದಾಸರಹಳ್ಳಿ	15.00
9	ಆನೇಕಲ್	5.00

3. ಮುಂದುವರೆದು, ಈ ಮೇಲ್ಕಂಡ ಅನುದಾನಕ್ಕೆ ಅನುಗುಣವಾಗಿ ವಿಧಾನಸಭಾ ಕ್ಷೇತ್ರವಾರು ಕಾಮಗಾರಿಗಳ ಕ್ರಿಯಾ ಯೋಜನೆಯನ್ನು ತಯಾರಿಸಿ, ಸಕ್ಷಮ ಪ್ರಾಧಿಕಾರದ ಮಂಜೂರಾತಿ ಪಡೆದು ಸರ್ಕಾರದ ಅನುಮೋದನೆಗೆ ಪ್ರಸ್ತಾವನೆಯನ್ನು ಕಳುಹಿಸಿಕೊಡುವಂತೆ ಮತ್ತು ಸದರಿ ಕಾಮಗಾರಿಗಳಿಗೆ ಹಣವನ್ನು ಮುಂದಿನ ಆರ್ಥಿಕ ವರ್ಷದಲ್ಲಿ ಬಿ.ಬಿ.ಎಂ.ಪಿ.ಗೆ ಹಂಚಿಕೆ ಮಾಡುವ ಒಟ್ಟಾರೆ ಅನುದಾನದಲ್ಲಿ ಬಿಡುಗಡೆ ಮಾಡಲಾಗುವುದೆಂದು ಸಹ ತಿಳಿಸಲಾಗಿದೆ.

4. ಮೇಲೆ(3) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಕೆ.ಆರ್.ಪುರಂ, ಯಶವಂತಪುರ ಮತ್ತು ರಾಜರಾಜೇಶ್ವರಿನಗರ ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿನ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಸೇರಿದ ನಗರಸಭೆ ಮತ್ತು ಪುರಸಭಾ ಕ್ಷೇತ್ರಗಳ ಅಭಿವೃದ್ಧಿಗಾಗಿ ರೂ.135.00 ಕೋಟಿಗಳ ಕಾಮಗಾರಿಗಳ ಕ್ರಿಯಾಯೋಜನೆಗೆ ಸರ್ಕಾರದ ಅನುಮೋದನೆಯನ್ನು ನೀಡಲಾಗಿರುತ್ತದೆ.

5. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರು ಮೇಲೆ (4) ರಲ್ಲಿ ಓದಲಾದ ಪತ್ರದಲ್ಲಿ ಬ್ಯಾಟರಾಯನಪುರ ವಿಧಾನ ಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ರೂ.40.00 ಕೋಟಿಗಳ ಕಾಮಗಾರಿಯ ಕ್ರಿಯಾ ಯೋಜನೆಯ ಪಟ್ಟಿಯನ್ನು ಲಗತ್ತಿಸಿ ಕಳುಹಿಸುತ್ತಾ, ಕ್ರಿಯಾ ಯೋಜನೆಯ ಕಾಮಗಾರಿಗಳು ರಸ್ತೆ ಅಭಿವೃದ್ಧಿಗೆ ಸಂಬಂಧಿಸಿದ್ದು, ಮಳೆಗಾಲ ಪ್ರಾರಂಭಗೊಳ್ಳುವ ಮುನ್ನವೇ ಕಾಮಗಾರಿಗಳನ್ನು ಅನುಷ್ಠಾನಗೊಳಿಸಬೇಕಾಗಿರುವುದರಿಂದ 2014-15ನೇ ಸಾಲಿನ ಆಯವ್ಯಯದಲ್ಲಿ ಈಗಾಗಲೇ ಘೋಷಿಸಲಾಗಿರುವ ರೂ.250.00 ಕೋಟಿಗಳ ವಿಶೇಷ ಅನುದಾನದಲ್ಲಿ ಮೇಲ್ಕಂಡ ಕ್ರಿಯಾ ಯೋಜನೆಗೆ ಸರ್ಕಾರದ ಅನುಮೋದನೆ ಮತ್ತು ಕಾಮಗಾರಿ ಸಂಖ್ಯೆಗಳನ್ನು ನೀಡಿ ಕಾಮಗಾರಿಗಳನ್ನು ಪ್ರಾರಂಭಿಸಲು ಸರ್ಕಾರದ ಅನುಮೋದನೆಯನ್ನು ಕೋರಿರುತ್ತಾರೆ.

6. ಈಗ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರು ಮೇಲೆ (5) ರಲ್ಲಿ ಓದಲಾದ ಪತ್ರದಲ್ಲಿ ಯಲಹಂಕ ವಿಧಾನ ಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ರೂ.15.00 ಕೋಟಿಗಳ ಕಾಮಗಾರಿಯ ಕ್ರಿಯಾ ಯೋಜನೆಯ ಪಟ್ಟಿಯನ್ನು ಲಗತ್ತಿಸಿ ಕಳುಹಿಸುತ್ತಾ, ಕ್ರಿಯಾ ಯೋಜನೆಯ ಕಾಮಗಾರಿಗಳು ರಸ್ತೆ ಅಭಿವೃದ್ಧಿಗೆ ಸಂಬಂಧಿಸಿದ್ದು, ಮಳೆಗಾಲ ಪ್ರಾರಂಭಗೊಳ್ಳುವ ಮುನ್ನವೇ ಕಾಮಗಾರಿಯನ್ನು ಅನುಷ್ಠಾನಗೊಳಿಸಬೇಕಾಗಿರುವುದರಿಂದ 2014-15 ನೇ ಸಾಲಿನ ಆಯವ್ಯಯದಲ್ಲಿ ಈಗಾಗಲೇ ಘೋಷಿಸಲಾಗಿರುವ ರೂ.250.00 ಕೋಟಿಗಳ ವಿಶೇಷ ಅನುದಾನದಲ್ಲಿ ಮೇಲ್ಕಂಡ ಕ್ರಿಯಾ ಯೋಜನೆಗೆ ಸರ್ಕಾರದ ಅನುಮೋದನೆ ಮತ್ತು ಕಾಮಗಾರಿ ಸಂಖ್ಯೆಗಳನ್ನು ನೀಡಿ ಕಾಮಗಾರಿಗಳನ್ನು ಪ್ರಾರಂಭಿಸಲು ಸರ್ಕಾರದ ಅನುಮೋದನೆಯನ್ನು ಕೋರಿರುತ್ತಾರೆ.

7. ಆಯುಕ್ತರ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ನಅಇ 745 ಎಂಎನ್‌ವೈ 2014,
ಬೆಂಗಳೂರು, ದಿನಾಂಕ: 28-04-2015.

8. ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಯಲಹಂಕ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿನ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಸೇರಿದ ನಗರ ಸಭೆ ಮತ್ತು ಪುರಸಭೆ ಕ್ಷೇತ್ರಗಳ ಅಭಿವೃದ್ಧಿಗಾಗಿ ರೂ.15.00 ಕೋಟಿಗಳ (ಹದಿನೈದು ಕೋಟಿ ರೂಪಾಯಿಗಳು) ವೆಚ್ಚದ

. . . 3 .

ಈ ಆದೇಶಕ್ಕೆ ಲಗತ್ತಿಸಿರುವ **ಅನುಬಂಧದಲ್ಲಿ** ತಿಳಿಸಿರುವ ಕಾಮಗಾರಿಗಳ ಕ್ರಿಯಾ ಯೋಜನೆಗೆ ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರದ ಅನುಮೋದನೆ ನೀಡಲಾಗಿದೆ.

(1) ಅನುಮೋದನೆಗೊಂಡ ಕಾಮಗಾರಿಗಳಿಗೆ ಅಂದಾಜು ಪಟ್ಟಿಗಳನ್ನು ಸಿದ್ಧಪಡಿಸಿ, ಸಕ್ಷಮ ಪ್ರಾಧಿಕಾರಿಗಳಿಂದ ತಾಂತ್ರಿಕ ಮತ್ತು ಆಡಳಿತಾತ್ಮಕ ಅನುಮೋದನೆ ಪಡೆಯುವುದು.

(2) ಕಾಮಗಾರಿಗಳನ್ನು ಅನುಷ್ಠಾನಗೊಲಿಸುವ ಮುನ್ನ ಕೆ.ಟಿ.ಪಿ.ಪಿ. ಕಾಯ್ದೆ/ನಿಯಮಗಳು ಮತ್ತು ಟೆಂಡರ್ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

(3) ಕಾಮಗಾರಿಗಳು ಪುನರಾವರ್ತಿತವಾಗದಂತೆ ನೋಡಿಕೊಳ್ಳತಕ್ಕದ್ದು.

(4) ಅನುಮೋದನೆಗೊಂಡ ಕಾಮಗಾರಿಗಳನ್ನು ಬದಲಾವಣೆ ಮಾಡಲು ಅವಕಾಶ ಇರುವುದಿಲ್ಲ.

(5) ಕ್ರಿಯಾ ಯೋಜನೆಯಂತೆ ಕಾ. ಗಾರಿಗಳನ್ನು ಕೈಗೊಂಡು, ಕಾಮಗಾರಿಗಳು ಪೂರ್ಣಗೊಂಡ ನಂತರ ಮುಂದಿನ ಆರ್ಥಿಕ ವರ್ಷದಲ್ಲಿ ಹಣವನ್ನು ಬಿಡುಗಡೆ ಮಾಡಲು ವಿವರವಾದ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎನ್.ಗೋಪಾಲಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ (ಬಿ.ಬಿ.ಎಂ.ಪಿ).

ಇವರಿಗೆ:-

1) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2) ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
4) ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
5) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-9),
6) ಮುಖ್ಯ ಲೆಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
7) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು/ಕಂಪೆಂಡಿಯಂ/ಇಲಾಖಾ ವೆಬ್‌ಸೈಟ್.

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಹೊಸದಾಗಿ ಸೇರ್ಪಡೆಗೊಂಡ ನಗರಸಭೆ ಮತ್ತು ಪುರಸಭೆಗಳ ಹಿಂದುಳಿದ ಪ್ರದೇಶಗಳ ಅಭಿವೃದ್ಧಿಗಾಗಿ 2014–15ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿರುವಂತೆ ರೂ.250.00 ಕೋಟಿಗಳ ವಿಶೇಷ ಅನುದಾನದಲ್ಲಿ ಕೈಗೊಳ್ಳುವ ಕಾಮಗಾರಿಗಳ ಕ್ರಿಯಾ ಯೋಜನೆಗೆ ಅನುಮೋದನೆ ನೀಡಿದ್ದು ಯಲಹಂಕ ವಿಧಾನಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಬದಲಿ ಕಾಮಗಾರಿಗೆ ಅನುಮೋದನೆ ನೀಡಿರುವ ಬಗ್ಗೆ.

ಓದಲಾಗಿದೆ: 1. ಸರ್ಕಾರದ ಆದೇಶ ಸಂಖ್ಯೆ: ನಅಇ 745 ಎಂಎನ್‌ವೈ 2014, ದಿನಾಂಕ: 28–04–2015.

2. ಆಯುಕ್ತರು, ಬಿ.ಬಿ.ಎಂ.ಪಿ. ಇವರ ಪತ್ರ ಸಂಖ್ಯೆ: ಬಿಬಿಎಂಪಿ/ಯವ/ಕಾ.ಪಾ.ಅ(ಯೋ.ವಿ)/ಪಿಆರ್/7078/2016–17, ದಿನಾಂಕ: 25–02–2017.

* * * * *

ಪ್ರಸ್ತಾವನೆ:

ಮೇಲೆ (1) ರಲ್ಲಿ ಓದಲಾದ ದಿನಾಂಕ: 28–041–2015ರ ಆದೇಶದಲ್ಲಿ, 2014–15ನೇ ಸಾಲಿನ ಆಯವ್ಯಯದಲ್ಲಿ ಬಿ.ಬಿ.ಎಂ.ಪಿ.ಗೆ ಹೊಸದಾಗಿ ಸೇರ್ಪಡೆಗೊಂಡ ನಗರಸಭೆ ಮತ್ತು ಪುರಸಭೆಗಳ ಹಿಂದುಳಿದ ಪ್ರದೇಶಗಳ ಅಭಿವೃದ್ಧಿಗಾಗಿ 2014–15ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿರುವಂತೆ ರೂ.250.00 ಕೋಟಿಗಳ ವಿಶೇಷ ಅನುದಾನದಲ್ಲಿ ಯಲಹಂಕ ವಿಧಾನಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ರೂ.15.00 ಕೋಟಿಗಳ ವೆಚ್ಚದಲ್ಲಿ ಕೈಗೊಳ್ಳುವ 09 ಕಾಮಗಾರಿಗಳ ಕ್ರಿಯಾ ಯೋಜನೆಗೆ ಕೆಲವೊಂದು ಷರತ್ತುಗಳನ್ನು ವಿಧಿಸಿ ಅನುಮೋದನೆ ನೀಡಲಾಗಿದೆ.

2. ಮೇಲೆ ಓದಲಾದ (2) ರಲ್ಲಿ ದಿನಾಂಕ: 25–02–2017ರ ಪತ್ರದಲ್ಲಿ, 2014–15ನೇ ಸಾಲಿನ ಆಯವ್ಯಯದಲ್ಲಿ ಬಿ.ಬಿ.ಎಂ.ಪಿ.ಗೆ ಹೊಸದಾಗಿ ಸೇರ್ಪಡೆಗೊಂಡ ನಗರಸಭೆ ಮತ್ತು ಪುರಸಭೆಗಳ ಹಿಂದುಳಿದ ಪ್ರದೇಶಗಳ ಅಭಿವೃದ್ಧಿಗಾಗಿ 2014–15ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿರುವಂತೆ ರೂ.250.00 ಕೋಟಿಗಳ ವಿಶೇಷ ಅನುದಾನದಲ್ಲಿ ಯಲಹಂಕ ವಿಧಾನಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ರೂ.15.00 ಕೋಟಿಗಳ ವೆಚ್ಚದಲ್ಲಿ ಕೈಗೊಳ್ಳುವ 09 ಕಾಮಗಾರಿಗಳ ಕ್ರಿಯಾ ಯೋಜನೆಗೆ ಅನುಮೋದನೆ ನೀಡಲಾಗಿದೆ. ಸದರಿ ಕ್ರಿಯಾ ಯೋಜನೆಯ ಕ್ರಮ ಸಂಖ್ಯೆ: 05ರ ಕಾಮಗಾರಿ Rehabilitation and construction of buildings being demolished for widening of road at Attur AK Colony in Ward No.03 ರೂ.200.00 ಲಕ್ಷಗಳಿಗೆ ಕಾಮಗಾರಿಗೆ ಬದಲಾಗಿ,

. . . 2 .

ಈ ಕೆಳಕಂಡ ಕಾಮಗಾರಿಗೆ ಬದಲಾವಣೆ ಮಾಡಿ ಅನುಮೋದನೆ ನೀಡುವಂತೆ ಕೋರಿರುತ್ತಾರೆ.

ಕ್ರ ಸಂ.	ಸರ್ಕಾರದ ಆದೇಶ ಸಂಖ್ಯೆ: ನಅಇ 745 ಎಂಎನ್‌ವೈ 2014, ದಿನಾಂಕ: 28-04-2015 ರಂತೆ ಅನುಮೋದನೆಗೊಂಡಿರುವ ಕಾಮಗಾರಿ ಹೆಸರು	ಮಂಜೂರಾದ ಮೊತ್ತ (ರೂ.ಲಕ್ಷಗಳಲ್ಲಿ)	ಪ್ರಸ್ತಾಪಿತ ಮಾರ್ಪಾಡು ಕಾಮಗಾರಿಗಳ ಹೆಸರು	ಅಂದಾಜು ಮೊತ್ತ ಲಕ್ಷಗಳಲ್ಲಿ
1	Rehabilitation and construction of buildings being demolished for widening of road at Attur AK Colony in Ward No.03	200.00	Developmental works to Vivekananda Park in Ward No. 03 in Yelahanka Assembly Constituency	200.00

3. ಅದರಂತೆ, ಸರ್ಕಾರವು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರಿ ಆದೇಶ ಸಂಖ್ಯೆ: ನಅಇ 136 ಎಂಎನ್‌ವೈ 2017,
ಬೆಂಗಳೂರು, ದಿನಾಂಕ: 21-04-2017.

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಸರ್ಕಾರದ ಆದೇಶ ಸಂಖ್ಯೆ: ನಅಇ 745 ಎಂಎನ್‌ವೈ 2014, ದಿನಾಂಕ: 28-04-2015 ರಲ್ಲಿ ಯಲಹಂಕ ವಿಧಾನಸಭಾ ಕ್ಷೇತ್ರದ ಸಮಗ್ರ ಅಭಿವೃದ್ಧಿಗಳಿಗೆ ಒಟ್ಟು 09 ಕಾಮಗಾರಿಗಳಿಗೆ ರೂ.15.00 ಕೋಟಿ ಅಂದಾಜು ವೆಚ್ಚದ ಕಾಮಗಾರಿಗಳ ಕ್ರಿಯಾ ಯೋಜನೆಗೆ ಅನುಮೋದನೆ ನೀಡಿದ್ದು, ಸದರಿ ಆದೇಶದ ಕ್ರಮ ಸಂಖ್ಯೆ: 05 ರಲ್ಲಿರುವ Rehabilitation and construction of buildings being demolished for widening of road at Attur AK Colony in Ward No.03ರ ಕಾಮಗಾರಿಯ ಬದಲಿಗೆ ಅದೇ ಮೊತ್ತದ ರೂ.200.00 ಲಕ್ಷಗಳಿಗೆ ಈ ಕೆಳಕಂಡ ಬದಲಿ ಕಾಮಗಾರಿಯ ಕ್ರಿಯಾ ಯೋಜನೆಗೆ ಅನುಮೋದನೆ ನೀಡಿ ಆದೇಶಿಸಿದೆ.

ಕ್ರ ಸಂ.	ಸರ್ಕಾರದ ಆದೇಶ ಸಂಖ್ಯೆ: ನಅಇ 745 ಎಂಎನ್‌ವೈ 2014, ದಿನಾಂಕ: 28-04-2015 ರಂತೆ ಅನುಮೋದನೆಗೊಂಡಿರುವ ಕಾಮಗಾರಿ ಹೆಸರು	ಮಂಜೂರಾದ ಮೊತ್ತ (ರೂ.ಲಕ್ಷಗಳಲ್ಲಿ)	ಪ್ರಸ್ತಾಪಿತ ಮಾರ್ಪಾಡು ಕಾಮಗಾರಿಗಳ ಹೆಸರು	ಅಂದಾಜು ಮೊತ್ತ ಲಕ್ಷಗಳಲ್ಲಿ
1	Rehabilitation and construction of buildings being demolished for widening of road at Attur AK Colony in Ward No.03	200.00	Developmental works to Vivekananda Park in Ward No. 03 in Yelahanka Assembly Constituency	200.00

ಉಳಿದಂತೆ, ಸದರಿ ಕಾಮಗಾರಿಗಳ ಕ್ರಿಯಾ ಯೋಜನೆಗಳಿಗೆ ಹೊರಡಿಸಿರುವ ಷರತ್ತುಗಳಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ. ಅನುಬಂಧದನ್ವಯ ಕಾಮಗಾರಿಗಳ ಕ್ರಿಯಾ ಯೋಜನೆಗಳನ್ನು ಅನುಷ್ಠಾನಗೊಳಿಸಲು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಕೆ. ವಿಕೇಶ್ ಬಾಬು)
ಸರ್ಕಾರ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ (ಬಿ.ಬಿ.ಎಂ.ಪಿ.)

ಇವರಿಗೆ:

1. ~~ಮಹಾಲೇಖಪಾಲರು, ಲೆಕ್ಕ ತಪಾಸಣೆ/ಲೆಕ್ಕಪತ್ರ, ಕರ್ನಾಟಕ ಬೆಂಗಳೂರು.~~
2. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
3. ವಿಶೇಷ ಆಯುಕ್ತರು (ಯೋಜನೆ), ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
4. ನಿರ್ದೇಶಕರು, ಖಜಾನೆ ಇಲಾಖೆ, ಪೋಡಿಯಂ ಬ್ಲಾಕ್, ವಿ.ವಿ.ಕೇಂದ್ರ, ಬೆಂಗಳೂರು.
5. ಜಂಟಿ ನಿರ್ದೇಶಕರು (ಹಣಕಾಸು), ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು.
6. ಉಪ ನಿರ್ದೇಶಕರು, ಮ್ಯಾನೇಜ್‌ಮೆಂಟ್ ನೆಟ್‌ವರ್ಕ್, ಖಜಾನೆ ಇಲಾಖೆ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
7. ಖಜಾನಾಧಿಕಾರಿಗಳು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
8. ಮುಖ್ಯ ಆರ್ಥಿಕಾಧಿಕಾರಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
9. ಮುಖ್ಯ ಲೆಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
10. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ.
11. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ–9), ವಿಧಾನಸೌಧ, ಬೆಂಗಳೂರು.
12. ಲೆಕ್ಕಾಧೀಕ್ಷಕರು, ತಾಂತ್ರಿಕ ಕೋಶ, ನಗರಾಭಿವೃದ್ಧಿ ಇಲಾಖೆ.
13. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.